# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1427
2. ಸದಸ್ಯರ ಹೆಸರು : ಶ್ರೀ ಕೆ.ಎಸ್.ನವೀನ್
3. ಉತ್ತರಿಸುವ ದಿನಾಂಕ : 18/12/2025
4. ಉತ್ತರಿಸುವ ಸಚಿವರು : ಮಾನ್ಯ ಲೋಕೋಪಯೋಗಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚಿತ್ರದುರ್ಗ ಜಿಲ್ಲೆಯ ಹೊಸ ಜಿಲ್ಲಾ ನ್ಯಾಯಾಲಯ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರ ಒದಗಿಸುವುದು) | ಚಿತ್ರದುರ್ಗ ನಗರದಲ್ಲಿ ಜಿಲ್ಲಾ ನ್ಯಾಯಾಲಯದ ನೂತನ ಕಟ್ಟಡ ನಿರ್ಮಿಸಲು ರೂ.93.30 ಕೋಟಿಗಳ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಿ ಅನುದಾನ ಮಂಜೂರಾತಿಗಾಗಿ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. |
| ಆ) | ನ್ಯಾಯಾಲಯದ ಕಟ್ಟಡವನ್ನು ಚಿತ್ರದುರ್ಗ ಜಿಲ್ಲೆಯ ಯಾವ ಸ್ಥಳದಲ್ಲಿ ನಿರ್ಮಿಸಲಾಗುತ್ತಿದೆ; ಸದರಿ ಕಟ್ಟಡ ಯಾವ ಹಂತದಲ್ಲಿದೆ; | ಚಿತ್ರದುರ್ಗ ಜಿಲ್ಲೆಯಲ್ಲಿ ನೂತನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನೂತನ ಕಟ್ಟಡವನ್ನು ನಿರ್ಮಿಸಲು ಚಿತ್ರದುರ್ಗ ನಗರದ ಕೆಳಗೋಟೆ ಸ.ನಂ. 93, 142, 143 ರಲ್ಲಿ ಒಟ್ಟು 9 ಎಕರೆ 25.44 ಗುಂಟೆ ಪ್ರದೇಶವನ್ನು ಮಾನ್ಯ ಜಿಲ್ಲಾಧಿಕಾರಿ, ಚಿತ್ರದುರ್ಗ ರವರು ನಿಗಧಿಪಡಿಸಿರುತ್ತಾರೆ. |
| ಇ) | ಸದರಿ ನ್ಯಾಯಾಲಯದ ಕಟ್ಟಡ ಕಟ್ಟಲು ಈವರೆಗೂ ಸರ್ಕಾರ ಎಷ್ಟು ಅನುದಾನ ನೀಡಿದೆ; ಕಟ್ಟಡವನ್ನು ಯಾವಾಗ ಪೂರ್ಣಗೊಳಿಸಲಾವುದು? (ಸಂಪೂರ್ಣ ವಿವರ ಒದಗಿಸುವುದು) | ಪ್ರಸ್ತುತ ಇಲಾಖೆಯಡಿ ಇರುವ ಅಧಿಕ ಕಾರ್ಯಭಾರದ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಮುಂದೂಡಲಾಗಿರುತ್ತದೆ. |

**ಸಂಖ್ಯೆ: ಲೋಇ 99 ಬಿಎಲ್ ಕ್ಯೂ 2025**

**(ಸತೀಶ ಜಾರಕಿಹೊಳಿ)**
ಲೋಕೋಪಯೋಗಿ ಸಚಿವರು.